ಪ್ರಾಚಾರ್ಯರ ಕಛೇರಿ
ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜು
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಘಟಕ ಕಾಲೇಜು
ದಾವಣಗೆರೆ – 577 004

**Off.: 08192-233414, 250716** **Fax: 08192-233412**

ಸಂಖ್ಯೆ:ಯುಬಿಡಿಟಿ: 01 :ಸಿಬ್ಬಂದಿ(1)/2019-20 / 474 ದಿನಾಂಕ: 26-07-2019

" ಅಧಿಸೂಚನೆ "

ವಿಷಯ :– 2019–20 ನೇ ಶೈಕ್ಷಣಿಕ ಸಾಲಿನಲ್ಲಿ ದಾವಣಗೆರೆಯ ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರುಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸಲು ತಿಳಿಸುತ್ತಿರುವ ಬಗ್ಗೆ.

ಉಲ್ಲೇಖ :– ಕುಲಸಚಿವರು, ವಿತಾವಿ, ಬೆಳಗಾವಿ ಇವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ ವಿತಾವಿ/ ಬಿಜಿಎಮ್/ಡಿಪಿಎಆರ್/ಸಿಆರ್(3)/09/2019–20/1226, ದಿನಾಂಕ: 25–07–2019.

----

ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಈ ಕೆಳಕಂಡ ವಿಭಾಗಗಳಲ್ಲಿ 2019–20 ನೇ ಶೈಕ್ಷಣಿಕ ಸಾಲಿನಲ್ಲಿ ಲಭ್ಯವಿರುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರುಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ನೇಮಕಾತಿಯಡಿ ನೇಮಕವಾಗುವ ಅತಿಥಿ ಉಪನ್ಯಾಸಕರುಗಳಿಗೆ ಮಾಸಿಕ ಸಂಚಿತ ವೇತನ ರೂ. 25,000=00 (ರೂ. ಇಪ್ಪತ್ತೈದು ಸಾವಿರ)ಗಳನ್ನು ನಿಗಧಿಪಡಿಸಲಾಗಿದೆ. ಅಭ್ಯರ್ಥಿಗಳು ಕಾಲೇಜಿನ ವೆಬ್‌ಸೈಟ್ **www.ubdtce.org/guestfaculty** ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: 27–07–2019 ರ ಬೆಳಿಗ್ಗೆ 10.00 ಗಂಟೆಯಿಂದ ದಿನಾಂಕ: 05–08–2019 ರವರೆಗೆ ಸಂಜೆ 5.00 ಗಂಟೆಯವರೆಗೆ ಮಾತ್ರ ಸಲ್ಲಿಸತಕ್ಕದ್ದು.

ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಿದ ನಂತರ ಅದನ್ನು ಪ್ರಿಂಟ್ ತೆಗೆದು ಅರ್ಜಿಯ ಜೊತೆ ಅರ್ಜಿ ಶುಲ್ಕಕ್ಕೆ ಸಂಬಂಧಿಸಿದಂತೆ ಎಸ್.ಬಿ.ಐ. ಆನ್‌ಲೈನ್ ಮೂಲಕ ಪಾವತಿಸಿದ ಬ್ಯಾಂಕ್ ಚಲನ್, ಶೈಕ್ಷಣಿಕ ದಾಖಲೆಗಳಾದ ಅಂಕ ಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಮೀಸಲಾತಿಗೆ ಸಂಬಂಧಪಟ್ಟ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸಿ, ಇವುಗಳನ್ನು ಪ್ರಾಚಾರ್ಯರು, ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜು, ಹದಡಿ ರಸ್ತೆ, ಪೋಸ್ಟ್ ಬಾಕ್ಸ್ ನಂ. 304, ದಾವಣಗೆರೆ – 577 004. ಇವರಿಗೆ ದಿನಾಂಕ: 08–08–2019 ರ ಸಂಜೆ 5.00 ಗಂಟೆಯೊಳಗಾಗಿ ತಲುಪುವಂತೆ ಅಂಚೆಯ ಮೂಲಕ ಅಥವಾ ಖುದ್ದಾಗಿ ಸಲ್ಲಿಸಲು ತಿಳಿಸಲಾಗಿದೆ.

ಅರ್ಜಿ ಶುಲ್ಕ : ಈ ಕೆಳಗೆ ತಿಳಿಸಿರುವ ಪ್ರಕಾರ ಅರ್ಜಿ ಶುಲ್ಕವನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2(ಎ), 2(ಬಿ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 500/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ರೂ. 250/– |

ಅರ್ಜಿ ಶುಲ್ಕವನ್ನು ಎಸ್.ಬಿ.ಐ. ಆನ್‌ಲೈನ್ ಸ್ಟೇಟ್ ಬ್ಯಾಂಕ್ ಕಲೆಕ್ಟ್ ಮುಖಾಂತರ ನೆಟ್ ಬ್ಯಾಂಕ್‌ನಲ್ಲಿ ಚಲನ್ ಮೂಲಕ ಪಾವತಿಸುವುದು, ಅರ್ಜಿಯ ಶುಲ್ಕ ಪಾವತಿಸಿದ ಮೂಲ ಚಲನ್‌ನ್ನು ಅರ್ಜಿ ಜೊತೆ ಲಗತ್ತಿಸಬೇಕು.

(ಸೂಚನೆ (1) :– ಎಸ್.ಬಿ.ಐ. ಆನ್‌ಲೈನ್ ಮುಖಾಂತರ ಅರ್ಜಿ ಶುಲ್ಕ ಪಾವತಿಸಲು ಈ ಕೆಳಕಂಡ ಕ್ರಮಗಳನ್ನು ಅನುಸರಿಸಲು ತಿಳಿಸಲಾಗಿದೆ.)

**For Online Fee Payment :-**

**Go to www.online sbi.com ⟹ sbcollect ⟹ Karnataka ⟹ educational institutions ⟹ ubdt college of engineering ⟹ category ⟹ Guest Faculty application fee**

ಸೂಚನೆ (2) :- ಸೂಚನೆ (1) ರಲ್ಲಿ ತಿಳಿಸಿರುವಂತೆ ಕ್ರಮಗಳನ್ನು ಅನುಸರಿಸಿ ಎಸ್.ಬಿ.ಐ. ಆನ್‌ಲೈನ್ ಮೂಲಕ ಅರ್ಜಿ ಶುಲ್ಕವನ್ನು ನೆಟ್‌ಬ್ಯಾಂಕಿಂಗ್ ಮೂಲಕ ಪಾವತಿಸಬಹುದು ಅಥವಾ ಚಲನ್ ಜನರೇಟ್ ಮಾಡಿ, ಎಸ್.ಬಿ.ಐ. ಬ್ಯಾಂಕ್‌ನ ಯಾವುದೇ ಬ್ರಾಂಚ್‌ನಲ್ಲಿ ಅರ್ಜಿ ಶುಲ್ಕ ಪಾವತಿಸಲು ಅವಕಾಶವಿರುತ್ತದೆ.

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಮುಗಿದ ನಂತರ ಸಂದರ್ಶನ ನಡೆಸುವ ಮೂಲಕ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಲಾಗುವುದು.

ಸಂದರ್ಶನ ನಿಗದಿ ಪಡಿಸಿದ ದಿನಾಂಕಗಳನ್ನು ಪ್ರತ್ಯೇಕವಾಗಿ ಅಭ್ಯರ್ಥಿಗಳಿಗೆ ತಿಳಿಸಲಾಗುವುದಿಲ್ಲ. ಆದರೆ ಸಂದರ್ಶನ ನಡೆಯುವ ದಿನಾಂಕ ಮತ್ತು ವೇಳೆ, ಸಂದರ್ಶನ ನಡೆಯುವ ಸ್ಥಳದ ಮಾಹಿತಿಯ ವಿವರಗಳನ್ನು ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನ ವೆಬ್‌ಸೈಟ್ **www.ubdtce.org** ನಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು **www.ubdtce.org** ವೆಬ್‌ಸೈಟ್‌ನಲ್ಲಿ ಸಂದರ್ಶನ ದಿನಾಂಕವನ್ನು ಖಚಿತ ಪಡಿಸಿಕೊಂಡು ಸಂದರ್ಶನಕ್ಕೆ ಮೂಲ ದಾಖಲಾತಿಗಳೊಂದಿಗೆ ಹಾಜರಾಗಲು ಈ ಮೂಲಕ ತಿಳಿಯಪಡಿಸಲಾಗಿದೆ.

----2

| ಕ್ರ.ಸಂ | ವಿಭಾಗ | ನಿಗಧಿ ಪಡಿಸಿರುವ ವಿದ್ಯಾರ್ಹತೆ : ಎ.ಐ.ಸಿ.ಟಿ.ಇ. ನಿಯಮಗಳಂತೆ<br>**Eligibility : As per AICTE norms**<br>ಸೂಚನೆ :- ಬೋಧನಾ ಅನುಭವ ಇದ್ದಲ್ಲಿ ಬೋಧನಾ ಅನುಭವ ಪ್ರಮಾಣ ಪತ್ರವನ್ನು ಸಂದರ್ಶನ ಸಮಯದಲ್ಲಿ ಹಾಜರು ಪಡಿಸಬೇಕು. |
|---|---|---|
| 01 | 02 | 03 |
| 01 | ಸಿವಿಲ್ | **Specialization :**<br>**1) Civil Engineering :**<br>**a) Structural Engineering**<br>**b) Environmental Engineering**<br>**c) Transportation Engineering / Highway Engineering/ Survey Engineering**<br>**d) CADS**<br>**The knowledge of CAD and relevant softwares is required.** |
| 02 | ಮೆಕ್ಯಾನಿಕಲ್ | **Specialization :**<br>**2) Mechanical Engineering :**<br>**a) Machine Design.**<br>**b) Thermal power Engineering.**<br>**c) Production management / Technology/ Allied areas** |
| 03 | ಇ ಅಂಡ್ ಇ | **Specialization :**<br>**3) Electrical & Electronics Engineering Department :-**<br>**a) Power system Engineering.**<br>**b) Power Electronics.**<br>**c) Electrical drives** |
| 04 | ಇ ಅಂಡ್ ಸಿ | **Specialization :**<br>**4) Electronics & Communication Engineering :-**<br>**a) Digital communication and networking (DCN).**<br>**b) VLSI & Embedded system .**<br>**c) Digital communication & Digital Electronics.** |
| 05 | ಸಿಎಸ್ ಅಂಡ್ ಇ | **Specialization :**<br>**5) Computer Science & Engineering Department :-**<br>**a) Computer Science and Engineering** |
| 06 | ಐ ಅಂಡ್ ಪಿಇ | **Specialization :**<br>**6) Industrial & Production Engineering Department :-**<br>**a) B.E (I & PE / Mechanical)**<br>**b) M.Tech (PEST / Production Mgmt / Allied arears)** |
| 07 | ಇ ಅಂಡ್ ಐಇ | **Specialization :**<br>**7) Electronics & Instrumentation Engineering Department :-**<br>**a) B.E., : 1) Electronics & Instrumentation Engineering**<br>**2) Instrumentation Technology .,**<br>**b) M.Tech 1) Bio-medical signal Processing & Instrumentation**<br>**2) Digital Electronics**<br>**3) Digital communication & Networking**<br>**4) VLSI & Embedded systems Design**<br>**5) Instrumentation & Control Engineering.**<br>**6) Signal Processing** |
| 08 | ಎಂ.ಸಿ.ಎ. | ಎಂ.ಟೆಕ್. ಇನ್ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ಅಥವಾ ಎಂ.ಸಿ.ಎ., ಪದವಿ |
| 09 | ಎಂ.ಬಿ.ಎ. | **Specialization ( MBA in) :**<br>**a) Marketing Management.**<br>**b) Finance Management.** |

---3

| | | |
|---|---|---|
| 10 | **Skill development faculty** | **Any post graduate degree passed in First Class with Research experience.<br>International Exposure is preferred.<br>Proficiency in English and soft skills.** |

ವಿಶೇಷ ಸೂಚನೆಗಳು :-

1) ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಅಭ್ಯರ್ಥಿಯು ಆನ್‌ಲೈನ್ ಅರ್ಜಿಯನ್ನು ಭರ್ತಿಮಾಡಿದ ನಂತರ ಪ್ರಿಂಟ್ ತೆಗೆದ ಅರ್ಜಿಯ ಮೊದಲ ಪುಟದಲ್ಲಿ ಪಾಸ್ ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರವನ್ನು ಅಂಟಿಸಿ ಭಾವಚಿತ್ರದ ಮೇಲೆ ಅಭ್ಯರ್ಥಿಯು ಸಹಿ ಮಾಡತಕ್ಕದ್ದು.

3) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

4) ಕಾಲೇಜಿನ ಅಧಿಕೃತ ವೆಬ್‌ಸೈಟ್ **www.ubdtce.org/guestfaculty** ನಲ್ಲಿ ದಿನಾಂಕ: **05–08–2019** ರ ಸಂಜೆ **5.00** ಗಂಟೆಯವರೆಗೂ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

5) ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

6) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಯಾವುದೇ ಸುಳ್ಳು / ತಪ್ಪು ಮಾಹಿತಿಗಳನ್ನು ನೀಡಬಾರದು. ಹಾಗೆ ನೀಡಿ ತದನಂತರ ಅದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು.

7) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ ದಿನಾಂಕ: **05–08–2019** ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರಬೇಕು.

8) ಅಭ್ಯರ್ಥಿಗಳು ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ.

9) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

10) ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಪ್ರತ್ಯೇಕವಾಗಿ ಆಯಾ ವಿಭಾಗಗಳ ಹೆಸರುಗಳನ್ನು ನಮೂದಿಸಿ ಪ್ರತ್ಯೇಕವಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬೇಕು.

11) ಅಭ್ಯರ್ಥಿಗಳು ನಿಗದಿಪಡಿಸಿದ ಅರ್ಜಿಯಲ್ಲಿಯೇ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೇ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

12) i) ಮೀಸಲಾತಿ ಕೋರುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳನ್ನು ಆನ್‌ಲೈನ್ ಅರ್ಜಿಯ ಪ್ರಿಂಟ್ ತೆಗೆದ ಹಾರ್ಡ್ ಕಾಪಿಯ ಜೊತೆ ಕೊನೆಯ ದಿನಾಂಕದೊಳಗಾಗಿ ಸಲ್ಲಿಸತಕ್ಕದ್ದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದ ನಮೂನೆ – ಡಿ ಪ್ರಮಾಣ ಪತ್ರ

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದ ನಮೂನೆ – ಇ ಪ್ರಮಾಣ ಪತ್ರ

ಸಿ) ಪ್ರವರ್ಗ – 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರ

**ಸೂಚನೆ:** – ನಮೂನೆ ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: **05–08–2019** ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

----4

ii) ಹೈದರಾಬಾದ್ - ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ ಇದ್ದಲ್ಲಿ ಅದರ ಪ್ರತಿಯನ್ನು ಸಂದರ್ಶನಕ್ಕೆ ಹಾಜರಾದಾಗ ಅರ್ಜಿಯ ಜೊತೆ ಲಗತ್ತಿಸಿ ಅದನ್ನು ಪರಿಶೀಲನೆಗೆ ಹಾಜರುಪಡಿಸಬೇಕು.

13) ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು. ಭರ್ತಿ ಮಾಡಿ ಸಲ್ಲಿಸಿದಂತಹ ಅರ್ಜಿಯಲ್ಲಿನ ಅಂಶ / ಮಾಹಿತಿಗಳನ್ನು ಯಾವುದೇ ಸಂದರ್ಭದಲ್ಲಿ ಬದಲಾವಣೆ ಮಾಡಲಾಗುವುದಿಲ್ಲ.

14) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಈ ಕೆಳಗೆ ಸಹಿ ಮಾಡಿರುವವರ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

15) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಪ್ರಿಂಟ್ ತೆಗೆದು, ಅದರ ಜೊತೆ ಅಗತ್ಯ ದಾಖಲೆಗಳನ್ನು ಸಲ್ಲಿಸಿದ ಅರ್ಜಿಗಳನ್ನು ಹೊರತುಪಡಿಸಿ, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸದೇ ನೇರವಾಗಿ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

26/7/19

ಪ್ರಾಂಶುಪಾಲರು,
ವಿಶ್ವವಿದ್ಯಾನಿಲಯ ಬಿ.ಡಿ.ಟಿ. ಇಂಜಿನಿಯರಿಂಗ್ ಕಾಲೇಜು,
ದಾವಣಗೆರೆ - ೫೭೭ ೦೦೪.
26/7/19

ಗೆ,

1) ಮಾನ್ಯ ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ, ಜ್ಞಾನಸಂಗಮ, ಬೆಳಗಾವಿ – ಇವರಿಗೆ ಮೇಲ್ಕಂಡ ಅಧಿಸೂಚನೆಯನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ವೆಬ್‌ಸೈಟ್ <u>www.vtu.ac.in</u> ನಲ್ಲಿ ಪ್ರಕಟಿಸಲು ಸಂಬಂಧಪಟ್ಟವರಿಗೆ ತಮ್ಮ ನಿರ್ದೇಶನ ನೀಡಲು ಕೋರಲಾಗಿದೆ.
2) ಅಧ್ಯಕ್ಷರು, ಸಿಎಸ್ ಅಂಡ್ ಇ ವಿಭಾಗ, ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜು ಮತ್ತು ಕಾಲೇಜಿನ ವೆಬ್‌ಸೈಟ್ ನಿರ್ವಹಣಾ ಸಮಿತಿಯ ಅಧ್ಯಕ್ಷರು, ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜು, ದಾವಣಗೆರೆ – ಇವರಿಗೆ ಮೇಲ್ಕಂಡ ಅಧಿಸೂಚನೆಯನ್ನು ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
3) ಶ್ರೀಮತಿ ರಶ್ಮಿ ಎಸ್. ಸಿ. ಪ್ರೋಗ್ರಾಮರ್, ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜು, ದಾವಣಗೆರೆ – ಇವರಿಗೆ ಮುಂದಿನ ಕ್ರಮಕ್ಕಾಗಿ.
4) ಎಲ್ಲಾ ವಿಭಾಗಗಳ ಅಧ್ಯಕ್ಷರು / ಮುಖ್ಯಸ್ಥರುಗಳಿಗೆ ಮೇಲ್ಕಂಡ ಅಧಿಸೂಚನೆಯನ್ನು ತಮ್ಮ ವಿಭಾಗದ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
5) ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನ ಮುಖ್ಯ ಪ್ರಕಟಣಾ ಫಲಕಕ್ಕೆ.
6) ಕಛೇರಿ ಪ್ರತಿ.